**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.227/2022

**PW**. 13

**CW**. 17

**ಸಾಕ್ಷಿಯ ಹೆಸರು –ಡಾ. ನಿತ್ಯಶ್ರೀ ಎಂ ಎನ್**

**ಗಂಡನ ಹೆಸರು –ಕೆ ಎಸ್ ವಿಕಾಸ**

**ವಯಸ್ಸು –27 ವರ್ಷಗಳು** ದಿನಾಂಕ 27–11–2024 ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ –ವೈದ್ಯರು , ಶ್ರೀನಿಧಿ ಕ್ಲೀನಿಕ್ , ಕೆ ಆರ್ ನಗರ**

**ವಾಸಸ್ಥಳ –ಕೆ ಆರ್ ನಗರ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ನಾನು 2019 ರಿಂದ ಜುಲೈ 2020 ರವೆರಗೆ ಬೃಂದಾವನ ಆಸ್ಪತ್ರೆಯಲ್ಲಿ ವೈದ್ಯರಾಗಿ ಸೇವೆ ಸಲ್ಲಿಸಿದ್ದೇನೆ.

ದಿಃ 03–03–2020 ರಂದು ರಾತ್ರಿ 10.30 ಗಂಟೆ ಸುಮಾರಿಗೆ ಬೃಂದಾವನ ಆಸ್ಪತ್ರೆಯ ತುರ್ತು ಚಿಕಿತ್ಸೆ ವಿಭಾಗದಲ್ಲಿ ನಾನು ಕರ್ತವ್ಯದಲ್ಲಿದ್ದಾಗ, ಗಾಯಾಳು ರವಿಕುಮಾರ ಹಲ್ಲೆಯ ಹಿನ್ನಲೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು,ಪೊಲೀಸರು ಆಸ್ಪತ್ರೆಗೆ ಬಂದು ನನ್ನ ಅನುಮತಿ ಮೇರೆಗೆ ಸದರಿ ಗಾಯಾಳುವಿನ ಹೇಳಿಕೆಯನ್ನು ನನ್ನ ಸಮಕ್ಷಮ ಪಡೆದುಕೊಂಡಿರುತ್ತಾರೆ. ಚಿಕಿತ್ಸೆ ಪಡೆಯುತ್ತಿದ್ದ ಗಾಯಾಳು ಹೇಳಿಕೆ ಕೊಡುವ ಸ್ಥಿತಿಯಲ್ಲಿದ್ದು, ಆ ಬಗ್ಗೆ ನಾನು ಪೊಲೀಸರು ಪಡೆದುಕೊಂಡ ಹೇಳಿಕೆಯಲ್ಲಿ ದೃಢಿಕರಿಸಿರುತ್ತೇನೆ. ಸದರಿ ಹೇಳಿಕೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ–27 ಎಂದು ಸಾಕ್ಷಿಯ ಸಹಿಯನ್ನು ನಿಪಿ–27(ಎ) ಎಂದು ಗುರುತಿಸಲಾಯಿತು. ನಿಪಿ–27 ರಮೇಲಿನ ಗಾಯಾಳುವಿನ ಸಹಿಯನ್ನು ನಿಪಿ–27(ಬಿ) ಎಂದು ಗುರುತಿಸಲಾಯಿತು.

**ಪಾಟೀಸವಾಲುಃ- ಆರೋಪಿ ಪರ ಶ್ರೀ ಎಸ್ ಪಿ ವಕೀಲರಿಂದಃ-**

ಬೃಂದಾವನ ಆಸ್ಪತ್ರೆಯ ಐ ಸಿ ಯು ವಿಭಾಗದಲ್ಲಿ ಗಾಯಾಳು ಚಿಕಿತ್ಸೆ ಪಡೆಯುತ್ತಿದ್ದರು. ಗಾಯಾಳುವಿಗೆ ನಮ್ಮ ಆಸ್ಪತ್ರೆಯ ಹಿರಿಯ ವೈದ್ಯರು ಚಿಕಿತ್ಸೆ ನೀಡಿದ್ದರು. ಗಾಯಾಳುವಿಗೆ ಯಾವ ಚಿಕಿತ್ಸೆ ನೀಡಿದರು ಎಂದು ದಾಖಲೆಗಳನ್ನು ನೋಡದೇ ಹೊರತು ನನಗೆ ಹೇಳಲು ಬರುವುದಿಲ್ಲ ಎಂದರೆ ಸರಿ . ಗಾಯಾಳು ನಮ್ಮ ಆಸ್ಪತ್ರೆಗೆ ಬಂದಾಗ , ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರು ಎಂದರೆ ಸರಿ . ಪೊಲೀಸರು ಯಾವ ಠಾಣೆಯವರು ಎಂದು ನನಗೆ ಹೇಳಲು ಬರುವುದಿಲ್ಲ ಎಂದರೆ ಸರಿ . ಪೊಲೀಸರು ಹೇಳಿಕೆ ಪಡೆಯುತ್ತಿದ್ದಾಗ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರು ಎಂದರೆ ಸರಿಯಲ್ಲ. ಗಾಯಾಳು ನನ್ನ ಸಮಕ್ಷಮ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ನಿಪಿ-27 ಅನ್ನು ಬರೆದವರ ಸಹಿ ಮತ್ತು ಪೊಲೀಸ್ ಠಾಣೆಯ ಸೀಲು ಅದರಲ್ಲಿ ಇಲ್ಲ ಎಂದರೆ ಸರಿ. ನಿಪಿ-27 ಅನ್ನು ಪೊಲೀಸರು ಮೊದಲೇ ಬರೆದುಕೊಂಡು ಬಂದು ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ನಮ್ಮ ಆಸ್ಪತ್ರೆಯಲ್ಲಿ ಗಾಯಾಳುವಿಗೆ ನೋವು ನಿವಾರಕ ಔಷಧಿ ನೀಡಿದ್ದ ಕಾರಣ ಗಾಯಾಳು ಹೇಳಿಕೆ ಕೊಡುವ ಸ್ಥಿತಿಯಲ್ಲಿರಲಿಲ್ಲ ಎಂದರೆ ಸರಿಯಲ್ಲ. ಪೊಲೀಸರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.